## ಅಪರ ಸಿವಿಲ್  ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ದೊಡ್ಡಬಳ್ಳಾಪುರ

**ಸಿ ಸಿ ನಂ : 523/2015**

**ಪಿ ಡಬ್ಲೂ - 3**

**ಸಿ ಡಬ್ಲೂ - 5**

**ದಿಃ 09.09.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಸರು ಃ ಆನಂದ್**

**ತಂದೆಯ ಹೆಸರು ಃ ಜನಾರ್ಧನ್ ಮೂರ್ತಿ**

**ವಯಸ್ಸು ಃ 41 ವರ್ಷ**

**ಉದ್ಯೋಗ ಃ ಅರ್ಚಕರು**

**ವಿಳಾಸ ಃ ಚಿಕ್ಕನಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು**

**ಮುಖ್ಯ ವಿಚಾರಣೆ ಃ ಸ ಸ ಅ ರವರಿಂದ**

ಆರೋಪಿತರು ಗೊತ್ತು. ಚಾಸಾ-1 ಮತ್ತು 2 ರವರು ಗೊತ್ತು. ಚಾಸಾ-1 ರವರು ಮರಣ ಹೊಂದಿರುತ್ತಾರೆ. ಚಾಸಾ-6 ರವರು ಗೊತ್ತು. ನಾನು ಯಾವುದೇ ಗಲಾಟೆಯನ್ನು ನೋಡಿಲ್ಲ. ನನಗೆ ಪ್ರಕರಣದ ಕುರಿತು ಮಾಹಿತಿ ಇಲ್ಲ. ನಾನು ಪೋಲೀಸರಿಗೆ ಹೇಳಿಕೆ ಕೊಟ್ಟಿಲ್ಲ.

**(ಈ ಹಂತದಲ್ಲಿ ಸ ಸ ಅ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಸ ಸ ಅ ರವರಿಂದಃ**

ದಿಃ 01.02.2015 ರಂದು ರಾತ್ರಿ 7-00 ಗಂಟೆಯ ಸಮಯದಲ್ಲಿ ನಾನು ನಮ್ಮ ಮನೆಯ ಬಳಿ ಇದ್ದಾಗ ನಡುವೆ ಚಾಸಾ-2 ರವರ ಮನೆಯ ಹತ್ತಿರ ಗಲಾಟೆಯ ಶಬ್ಧ ಕೇಳಿ ಹೋಗಿ ನೋಡಿದಾಗ ಚಾಸಾ-1 ರವರು ತನ್ನ ಮನೆಯ ಹತ್ತಿರ ಸೌದೆ ಮತ್ತು ಮಚ್ಚನ್ನು ಯಾರೋ ಎತ್ತಿಕೊಂಡು ಹೋಗಿದ್ದಾರೆ ಎಂದು 2 ನೆ ಆರೋಪಿಗೆ ಕೇಳಿದಾಗ 2 ನೇ ಆರೋಪಿಯು ನೀನು ಯಾವಳೇ ಕೇಳಲು ಎಂದು ಅವಾಚ್ಯಶಬ್ಧಗಳಿಂದ ಬೈದು ಗಲಾಟೆ ಮಾಡುತ್ತಿದ್ದಳು ಎಂದರೆ ಸರಿಯಲ್ಲ. ಅಷ್ಟರಲ್ಲಿ 1 ನೇ ಆರೋಪಿ ಅಲ್ಲಿಗೆ ಬಂದು ನನ್ನ ಅಮ್ಮನನ್ನು

ಏನು ಕೇಳುವುದು ಎಂದು ಅವಾಚ್ಯಶಬ್ಧಗಳಿಂದ ಬೈದು ಅಲ್ಲಿಯೇ ಬಿದ್ದಿದ್ದ ಒಂದು ದೊಣ್ಣೆಯನ್ನು ತೆಗೆದುಕೊಂಡು ಚಾಸಾ-1 ರವರ ಎಡಗೈಗೆ ಹೊಡೆದು ರಕ್ತಗಾಯ ಮಾಡಿದನು ಎಂದರೆ ಸರಿಯಲ್ಲ. ಜಗಳ ಬಿಡಿಸಲು ಬಂದ ಚಾಸಾ-2 ರವರಿಗೂ 1 ನೇ ಆರೋಪಿ ಕಾಲಿನಿಂದ ಒದ್ದ ಎಂದರೆ ಸರಿಯಲ್ಲ. ಅಲ್ಲಿಯೇ ಇದ್ದ ನಾನು ಮತ್ತು ಚಾಸಾ-6 ರವರು ಜಗಳ ಬಿಡಿಸಿದೆವು ಎಂದರೆ ಸರಿಯಲ್ಲ. ಈ ಕುರಿತು ಚಾಸಾ-1 ಪೋಲೀಸರಿಗೆ ದೂರನ್ನು ದಾಖಲಪಿಸಿದ್ದು, ದಿಃ 04.02.2015 ರಂದು ಪೋಲೀಸರು ಈಗ ಮೇಲೆ ಓದಿ ಹೇಳಿದಂತೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿನ ವಿಚಾರಗಳು ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಂದ ಕಂಪ್ಯೂಟರನಲ್ಲಿ ಮಾಡಿಸಲಾಯಿತು)**

**ಓ ಹೇ ಕೇ ಸ ಅದೆ**

**ಅಪರ ಸಿವಿಲ್ ನ್ಯಾ. ಮತ್ತು**
**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**